ಅಧ್ಯಕ್ಷರು : ಪಟ್ಟಿಯನ್ನು ಮಂಡಿಸಲಾಯಿತು.

ಬೆಂಗಳೂರು ನಗರ ವಿಧಾನ ಸಭಾ ಕ್ಷೇತ್ರಗಳಿಗೆ ಆಶ್ರಯ ಯೋಜನೆಯಡಿಯಲ್ಲಿ ನಿಗಧಿಪಡಿಸಿರುವ ಹಣ

4821 - ಶ್ರೀ ಜೆ. ಅಲೆಗ್ಸ್ಯಾಂಡರ್ (ಭಾರತಿನಗರ) : ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ನಗರ ವಿಧಾನ ಸಭಾ ಕ್ಷೇತ್ರಗಳಿಗೆ ಆಶ್ರಯ ಯೋಜನೆಯಡಿಯಲ್ಲಿ ನಿಗಧಿಪಡಿಸಲಾದ ಮೊತ್ತ?*

ಆ) *ಬೆಂಗಳೂರಿನ ಭಾರತೀನಗರ ವಿಧಾನಸಭಾ ಕ್ಷೇತ್ರದಲ್ಲಿ ಕರ್ನಾಟಕ ಗೃಹ ಮಂಡಳಿ ಆಶ್ರಯ ಯೋಜನೆ ಯಡಿಯಲ್ಲಿ ಹಂಚಿಕೆ ಮಾಡಲಾದ ಮನೆಗಳಲ್ಲಿ ಬೇರೆ ಜನರು ಅನಧಿಕೃತವಾಗಿ ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ, ಇವರನ್ನು ಹೊರ ಹಾಕಲು ಸರ್ಕಾರ ತೆಗೆದುಕೊಳ್ಳಲು ಉದ್ದೇಶಿಸಿರುವ ಕ್ರಮವೇನು?*

ಶ್ರೀ ಖಮರುಲ್ ಇಸ್ಲಾಂ (ವಸತಿ ಸಚಿವರು) :

ಅ) 2000-2001ನೇ ಸಾಲಿನಲ್ಲಿ ಯಾವ ಮೊತ್ತವು ಬಿಡುಗಡೆ ಮಾಡಿರುವುದಿಲ್ಲ.

ಆ) ಬಂದಿದೆ. ಸುಮಾರು 400 ಮನೆಗಳಲ್ಲಿ ಜನರು ಅನಧಿಕೃತವಾಗಿ ವಾಸಿಸುತ್ತಿದ್ದಾರೆ.

ಇ) ಕರ್ನಾಟಕ ಗೃಹ ಮಂಡಳಿ ಮತ್ತು ಗುತ್ತಿಗೆದಾರರು, ಅನಧಿಕೃತವಾಗಿ ವಾಸಿಸುತ್ತಿರುವರನ್ನು ಹೊರ ಹಾಕಲು ಪೋಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿರುವರು. ಕಾನೂನಿನ ವ್ಯವಸ್ಥೆ ಅನುಸರಿಸಿ, ಇವರನ್ನು ಹೊರಹಾಕಲು ಕ್ರಮ ಕೈಗೊಳ್ಳಲಾಗುವುದು.

ಚಿಕ್ಕಬಳ್ಳಾಪುರದಲ್ಲಿ ಬಸ್ ನಿಲ್ದಾಣ ನಿರ್ಮಾಣ

4822 - ಶ್ರೀಮತಿ ಅನಸೂಯಮ್ಮ ನಟರಾಜನ್ ಕೆ.ವಿ. (ಚಿಕ್ಕಬಳ್ಳಾಪುರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಚಿಕ್ಕಬಳ್ಳಾಪುರದಲ್ಲಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಬಸ್ ನಿಲ್ದಾಣವನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆಯೇ?*

ಆ) *ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡು ಕ್ರಮಗಳು ಯಾವುವು?*

ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

ಅ) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಚಿಕ್ಕಬಳ್ಳಾಪುರದಲ್ಲಿ ಈಗಾಗಲೇ ಒಂದು ಬಸ್ ನಿಲ್ದಾಣವನ್ನು ನಿರ್ಮಿಸಿದೆ.